ಕರ್ನಾಟಕ ಸರ್ಕಾರ

# ಜಿಲ್ಲಾ ಪಂಚಾಯತ್, ಕೊಪ್ಪಳ

**ಜಿಲ್ಲಾಆಡಳಿತ ಭವನ, ಕೊಪ್ಪಳದೂರವಾಣಿ :08539-220002 ಫ್ಯಾಕ್ಸ್ : 08539-220040**email : ceo_zp_kpl@nic.in

**ಸಂ:** ಜಿಪಂಕೊ/ಉಖಾಯೋ/ಹೊಸಿ/ಸಿಆರ್-112/2023-24 ದಿನಾಂಕ : 20.07.2023

**ಗೆ,**
ಬಿ.ಕೆ.ಆರ್. ಸ್ವಾಮಿ ಸೆಕ್ಯೂರಿಟಿ ಏಜನ್ಸಿ,
#2644, ಎಂ.ಸಿ.ಸಿ "ಬಿ" ಬ್ಲಾಕ್,
6ನೇ ವಾರ್ಡ್, 2ನೇ ಕ್ರಾಸ್, ವಾಟರ್ ಟ್ಯಾಂಕ್ ಹತ್ತಿರ,
ದಾವಣಗೇರಿ-577004

**ವಿಷಯ :** ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಮಂಜೂರಾಗಿರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವುದು ಹಾಗೂ ಹೊಸದಾಗಿ ತಾಂತ್ರಿಕ ಸಹಾಯಕರು ಕೃಷಿ-05, ಅರಣ್ಯ-07 ಮತ್ತು ರೇಷ್ಮೆ-01ಹುದ್ದೆಗಳನ್ನು ಒದಗಿಸುವ ಕುರಿತು.

**ಉಲ್ಲೇಖ :**
1. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಬೆಂಗಳೂರು ರವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ : RDC-EGS/874/2022 (E-931951) ದಿನಾಂಕ : 01.12.2020
2. ಈ ಕಛೇರಿ ಪತ್ರ ಸಮ ಸಂಖ್ಯೆ ದಿನಾಂಕ : 05.12.2022

*-*-*-*-*

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನದಲ್ಲಿ ನೆರವು ನೀಡಲು ಮಂಜೂರಾಗಿರುವ ಖಾಲಿ ಹುದ್ದೆಗಳನ್ನು ಹೊರ ಗುತ್ತಿಗೆ ಆಧಾರದಲ್ಲಿ ಮಾನವ ಸಂಪನ್ಮೂಲ ಸಂಸ್ಥೆಗಳ ಮೂಲಕ ಸೇವೆಯನ್ನು ಪಡೆಯಲು ಉಲ್ಲೇಖ (1)ರ ಪತ್ರದನ್ವಯ ಸೂಚಿಸಿರುತ್ತಾರೆ. ಅದರಂತೆ ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಈಗಾಗಲೇ ಉಲ್ಲೇಖ (2)ರನ್ವಯ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿತ್ತು. ಆ ಪ್ರಕಾರ ಈಗಾಗಲೇ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಹೊಸ ಅರ್ಹ ಅಭ್ಯರ್ಥಿಗಳು ಆನ್ ಲೈನ್ ಮೂಲಕ NIC ಜಿಲ್ಲಾ ವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸಲು ಒದಗಿಸಲಾದ Link ಬಳಸಿಕೊಂಡು ಅರ್ಜಿ ಸಲ್ಲಿಸಲು ರಾಜ್ಯ ಮತ್ತು ಜಿಲ್ಲಾ ಮಟ್ಟದ ಪ್ರಚಲಿತ ದಿನ ಪತ್ರಿಕೆಗಳಲ್ಲಿ ಹೆಚ್ಚು ಹೆಚ್ಚು ಜಾಹಿರಾತು ನೀಡಿ ಪ್ರಚುರಪಡಿಸಲು ಸೂಚಿಸಲಾಗಿದೆ.

**ವಿವರ ಈ ಕೆಳಗಿನಂತಿದೆ :-**

| ಕ್ರ.ಸಂ | ಹುದ್ದೆಯ ಹೆಸರು | ಖಾಲಿ ಹುದ್ದೆಗಳ ಸಂಖ್ಯೆ | ವಿದ್ಯಾರ್ಹತೆ ಹಾಗೂ ಅನುಭವ | ವಯೋಮಿತಿ |
|---|---|---|---|---|
| 01 | ತಾಂತ್ರಿಕ ಸಹಾಯಕರು (ಕೃಷಿ) | 05 | Graduation in Agriculture With Computer Knowledge ಹಾಗೂ ಸಂಬಂಧಿಸಿದ ಕ್ಷೇತ್ರದಲ್ಲಿ 03 ವರ್ಷದ ಅನುಭವ ಹೊಂದಿರತಕ್ಕದ್ದು. | 21 ರಿಂದ 40 ವರ್ಷಗಳು |
| 02 | ತಾಂತ್ರಿಕ ಸಹಾಯಕರು (ಅರಣ್ಯ) | 07 | Graduation in Forest With Computer Knowledge ಹಾಗೂ ಸಂಬಂಧಿಸಿದ ಕ್ಷೇತ್ರದಲ್ಲಿ 03 ವರ್ಷದ ಅನುಭವ ಹೊಂದಿರತಕ್ಕದ್ದು. | 21 ರಿಂದ 40 ವರ್ಷಗಳು |
| 03 | ತಾಂತ್ರಿಕ ಸಹಾಯಕರು (ರೇಷ್ಮೆ) | 01 | Graduation in Sericulture With Computer Knowledge ಹಾಗೂ ಸಂಬಂಧಿಸಿದ ಕ್ಷೇತ್ರದಲ್ಲಿ 03 ವರ್ಷದ ಅನುಭವ ಹೊಂದಿರತಕ್ಕದ್ದು. | 21 ರಿಂದ 40 ವರ್ಷಗಳು |

- ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: 1-08-2023
- ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 16-08-2023

**ಸೂಚನೆಗಳು :**

- ಆಯ್ಕೆಯಾದ ಅಭ್ಯರ್ಥಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾನವ ಸಂಪನ್ಮೂಲ ಸಂಸ್ಥೆಯ ಮೂಲಕ ಸೇವೆಗೆ ಪಡೆಯಲಾಗುವುದು.
- ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಅರ್ಜಿ ನಮೂನೆಯಲ್ಲಿ ನಮೂದಿಸಿರುವ ದಾಖಲೆಗಳಾದ ವಿದ್ಯಾರ್ಹತೆ/ ಸೇವಾನುಭವಕ್ಕೆ ಸಂಬಂಧಪಟ್ಟ ಎಲ್ಲಾ ಮೂಲ ಪ್ರಮಾಣ ಪತ್ರ/ ದಾಖಲೆಗಳನ್ನು ಪರಿಶೀಲನಾ ಸಮಯದಲ್ಲಿ, ಕಡ್ಡಾಯಕವಾಗಿ ಹಾಜರುಪಡಿಸುವುದು ತಪ್ಪಿದಲ್ಲಿ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.

**2ನೇ ಪುಟಕ್ಕೆ.....**

- ದಾಖಲಾತಿ ಪರಿಶೀಲನೆಯಲ್ಲಿ ಅರ್ಹಗೊಂಡ ಅಭ್ಯರ್ಥಿಗಳನ್ನು ವಿದ್ಯಾರ್ಹತೆ ಹೊಂದಿದ ಅಂಕಗಳು ಹಾಗೂ ಪಡೆದ ಸೇವಾ ಅನುಭವದ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಚುರಪಡಿಸಲಾಗುವುದು.
- ಸದರಿ ತಾತ್ಕಾಲಿಕ ಮೆರಿಟ್ ಪಟ್ಟಿಗೆ ಆಕ್ಷೇಪಣೆ ಆಹ್ವಾನಿಸಿ ಸಲ್ಲಿಕೆಯಾದ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲನೆ ಮಾಡಿ ಅಂತಿಮ ಮೆರಿಟ್ ಪಟ್ಟಿಯನ್ನು ಪ್ರಕಟಣೆಗೊಳಿಸಲಾಗುವು
- ಸದರಿ ಅಂತಿಮ ಹೊರಿಟ್ ಪಟ್ಟಿಯಲ್ಲಿ ಗರಿಷ್ಠ ಅಂಕಗಳನ್ನು ಪಡೆದ ಅಭ್ಯರ್ಥಿಗಳನ್ನು ಸಂಬಂಧಪಟ್ಟ ಹುದ್ದೆಗಳ ಅನುಗುಣವಾಗಿ ಆಯ್ಕೆಗೆ ಪರಿಗಣಿಸಲಾಗುವುದು.
- ಸಂದರ್ಶನ ಇರುವುದಿಲ್ಲ.
- ಖಾಲಿ ಹುದೆಗಳನ್ನು ಹೆಚ್ಚಿಸುವ ಅಥವಾ ಕಡಿಮೆ ಮಾಡುವ ಅಧಿಕಾರವು ನೇಮಕಾತಿ ಪ್ರಾಧಿಕಾರಿ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿ.ಪಂ. ಕೊಪ್ಪಳ ರವರು ಹೊಂದಿರುತ್ತಾರೆ.

**ಮಾಸಿಕ ಸಂಭಾವನೆ :**

- ತಾಂತ್ರಿಕ ಸಹಾಯಕ (ಕೃಷಿ, ಅರಣ, ತೋಟಗಾರಿಕೆ) ಹುದ್ದೆಗೆ ಮಾಸಿಕ ಸಂಭಾವನೆ ರೂ.24,000/-ಗಳು (ಹಾಗೂ ಪ್ರಯಾಣ ಭತ್ಯೆ ರೂ.2,000/-ಗಳು

**ಆಯ್ಕೆಯ ವಿಧಾನ:**

ಈ ಕೆಳಕಂಡ ವಿಧಾನವನ್ನು ಅಳವಡಿಸಿ ಮೆರಿಟ್ ಪಟ್ಟಿ ಸಿದ್ಧಪಡಿಸಿ ಮೆರಿಟ್ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುವುದು.

**ಹುದ್ದೆ:- ತಾಂತ್ರಿಕ ಸಹಾಯಕ ಕೃಷಿ/ ತೋಟಗಾರಿಕೆ /ಅರಣ್ಯ**

1, ಕನಿಷ್ಠ ವಿದ್ಯಾರ್ಹತೆಗೆ -100 ಅಂಕಗಳು

2. ಸ್ನಾತಕೋತ್ತರ ಪದವಿಗೆ -10 ಅಂಕಗಳು

3. ನಿಗದಿಪಡಿಸಿದ ಅನುಭವಕ್ಕೆ- 10 ಅಂಕಗಳು ಗರಿಷ್ಠ

**(ನಿಗದಿಪಡಿಸಿದ 36 ತಿಂಗಳು ಅಥವಾ ಹೆಚ್ಚಿನ ಅವಧಿಯ ಅನುಭವಕ್ಕೆ ಗರಿಷ್ಠ 10 ಅಂಕಗಳು (ಅಂದರೆ ಪ್ರತಿ ತಿಂಗಳ ಅನುಭವಕ್ಕೆ 0.28 ಅಂಕಗಳಂತೆ ಸಂಕಲನ ಮಾಡುವುದು) ಒಟ್ಟು -120 ಅಂಕಗಳು**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಜಿಲ್ಲಾ ಪಂಚಾಯತ ಕೊಪ್ಪಳ.

**ಪ್ರತಿಯನ್ನು :**

1. ಮಾನ್ಯ ಆಯುಕ್ತರು, ನಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಫ್ಲಾಟ ನಂ:1234, ಕೆ.ಎಸ್.ಐ.ಐ.ಡಿ.ಸಿ ಕಟ್ಟಡ, ಐ.ಟಿ ಪಾರ್ಕ್, 05 ನೇ ಮಹಡಿ ಸೌತ್ ಬ್ಲಾಕ್, ರಾಜಾಜಿನಗರ ಇಂಡಸ್ಟ್ರೀಯಲ್ ಎಸ್ಟೇಟ್.ಬೆಂಗಳೂರು-560044ಇವರ ಮಾಹಿತಿಗಾಗಿ.
2. ಜಿಲ್ಲಾ NIC ಅಧಿಕಾರಿಗಳು, NIC, ಕೊಪ್ಪಳ ಇವರಿಗೆ ಸೂಕ್ತ ಕ್ರಮಕ್ಕಾಗಿ ಕೊಡುತ್ತಾ ಜಿಲ್ಲಾ ವೆಬ್ ಸೈಟಿನಲ್ಲಿ ಅರ್ಜಿ ನಮೂನೆಯನ್ನು ತಯಾರಿಸಿ, ಆಯ್ಕೆ ವಿಧಾನ ಮತ್ತು ನಿಗಧಿಪಡಿಸಿದ ವಿದ್ಯಾರ್ಹತೆಗನುಗುಣವಾಗಿ ನಿಗಧಿತ ದಿನಾಂಕಗಳಿಂದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅನುವು ಮಾಡಿಕೊಡುವುದು.
3. ಜಿಲ್ಲಾ ವಾರ್ತಾಧಿಕಾರಿಗಳು, ವಾರ್ತಾ ಮತ್ತು ಪ್ರಚಾರ ಇಲಾಖೆ, ಕೊಪ್ಪಳ ಇವರಿಗೆ ಕೊಡುತ್ತಾ ಜಿಲ್ಲಾ ಮತ್ತು ರಾಜ್ಯ ಮಟ್ಟದ ದಿನ ಪತ್ರಿಕೆಗಳಲ್ಲಿ ಉಚಿತವಾಗಿ ಪ್ರಚುರಪಡಿಸಲು ಸೂಚಿಸಿದೆ.